:ಪ್ರಕಟಣೆಯ ಕೃಪೆಗಾಗಿ: (ಇಂದು ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮ)

ಮಾನ್ಯರೆ,

# "ವೈದ್ಯರು ಜನಭಾಷೆ ಕಲಿತರೆ ಸೇವೆ ಸರಳ: ಟಿ.ಎಸ್.ನಾಗಾಭರಣ"

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕನ್ನಡ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷರ ಅಭಿಮತ

ಬೆಂಗಳೂರು: ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕನ್ನಡವನ್ನು ಒಂದು ಭಾಷೆಯಾಗಿ ಕಡ್ಡಾಯವಾಗಿ ಕಲಿಸುವುದು ಸರ್ಕಾರದ ಆದೇಶದನ್ವಯ ಅವುಗಳ ಜವಾಬ್ದಾರಿಯಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಟಿ.ಎಸ್.ನಾಗಾಭರಣ ಅವರು ಹೇಳಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕನ್ನಡ ಅನುಷ್ಠಾನದ ಪ್ರಗತಿಯನ್ನು ಜಾಲ ಸಂಪರ್ಕ ಸಭೆಯ ಮೂಲಕ ಪರಿಶೀಲನೆ ನಡೆಸಿ ಮಾತನಾಡಿದ ಅವರು, ವೈದ್ಯಕೀಯ ಶಿಕ್ಷಣ ಅಭ್ಯಾಸ ಮಾಡುವವರು ಕಡ್ಡಾಯವಾಗಿ ಗ್ರಾಮೀಣ ಸೇವೆಯನ್ನು ಮಾಡಬೇಕಿದೆ. ಹಳ್ಳಿಗಳಲ್ಲಿ ಸೇವೆ ಸಲ್ಲಿಸುವವರು ಜನಭಾಷೆಯಲ್ಲಿ ರೋಗಿಗಳನ್ನು ಆತ್ಮೀಯವಾಗಿ ಮಾತನಾಡಿಸಿ ರೋಗಗಳ ಗುಣಾವಶೇಷಗಳನ್ನು ಅರಿತರೆ ಸುಲಭವಾಗಿ ಚಿಕಿತ್ಸೆಯನ್ನು ನೀಡಿ ತಮ್ಮ ಸೇವಾಕಾರ್ಯವನ್ನು ಉತ್ತಮವಾಗಿ ಮಾಡಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ವೃತ್ತಿ ಶಿಕ್ಷಣದಲ್ಲಿ ಕನ್ನಡ ಉಳಿದರೆ; ಬಳಕೆಯಲ್ಲೂ ಕನ್ನಡವನ್ನು ಮೆರೆಸಬಹುದಾಗಿದೆ. ಹಾಗಾಗಿ ವೈದ್ಯಕೀಯ ಶಿಕ್ಷಣ ಕಲಿಯುವ ಕನ್ನಡೇತರರಿಗೂ ವ್ಯವಹಾರಿಕ ಕನ್ನಡವನ್ನು ಶಿಕ್ಷಣ ಹಂತದಲ್ಲೇ ಕಲಿಸುವ ಯೋಜನೆಯನ್ನು ವಿಶ್ವವಿದ್ಯಾಲಯಗಳು ಹಮ್ಮಿಕೊಳ್ಳಬೇಕು. ಜೊತೆಗೆ ಕನ್ನಡದ ವೈದ್ಯಕೀಯ ನಿಘಂಟನ್ನು ಮಾಡಿದರೆ ವೈದ್ಯಶಾಸ್ತ್ರದ ವಿದ್ಯಾರ್ಥಿಗಳಿಗೆ ಅನುಕೂಲವಾಗುವುದರ ಜೊತೆಗೆ ಆ ಜ್ಞಾನದ ತಿಳುವಳಿಕೆಯನ್ನು ಬಯಸುವ ಹೊರ ಜಗತ್ತಿನ ಮನಸ್ಸುಗಳಿಗೂ ಕೂಡ ಅನುಕೂಲವಾಗಲಿದೆ ಎಂದರು.

ದಿನೆ ದಿನೇ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-೧೯ ಸೇವಾ ಕಾರ್ಯದಲ್ಲಿ ತೊಡಗಿಕೊಂಡಿರುವ ತಮ್ಮೆಲ್ಲಾ ಕೋವಿಡ್ ವಾರಿಯರ್ಸ್ ಗಳಿಗೆ ಕೃತಜ್ಞತೆಗಳನ್ನು ಸಲ್ಲಿಸಿದ ಪ್ರಾಧಿಕಾರದ ಅಧ್ಯಕ್ಷರು, ಇಂತಹ ದುರಿತಕಾಲದಲ್ಲಿ ಸಲ್ಲಿಸುತ್ತಿರುವ ತಮ್ಮ ಸೇವೆ ಪ್ರಶಂಸನೀಯ ಎಂದು ಅಭಿನಂದನೆಗಳನ್ನು ಸಲ್ಲಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಕನ್ನಡೇತರರು ಶಿಕ್ಷಣವನ್ನು ಪಡೆದುಕೊಳ್ಳುತ್ತಿದ್ದಾರೆ. ಅವರುಗಳಿಗೆಲ್ಲ ಅನುಕೂಲವಾಗುವಂತೆ ಮತ್ತು ಸುಲಭವಾಗಿ ಕನ್ನಡವನ್ನು ಕಲಿಯಲು ಸಹಕಾರಿಯಾಗುವ ನಿಟ್ಟಿನಲ್ಲಿ ಪ್ರತ್ಯೇಕ ಪಠ್ಯಪುಸ್ತಕವನ್ನು ರಚಿಸುವುದು ಮತ್ತು ಬೋಧನಾ ಸಮಯವನ್ನು ೪೦ ಗಂಟೆಗಳ ಅವಧಿಗೆ ಹೆಚ್ಚಿಸುವಂತೆ ತಾಕೀತು ಮಾಡಿದರು.

@ ಕೋವಿಡ್ ವಾರಿಯರ್ಸ್ ಗೆ ಅಭಿನಂದನೆಗಳನ್ನು ಸಲ್ಲಿಸಿದ ಅಧ್ಯಕ್ಷರು

@ ಶಿಕ್ಷಣ ಹಂತದಲ್ಲೆ ಕನ್ನಡ ಕಲಿಕೆ ಕಡ್ಡಾಯ ಮಾಡುವುದು ಅಗತ್ಯ

@ ವೃತ್ತಿ ಶಿಕ್ಷಣದಲ್ಲಿ ಕನ್ನಡ ಉಳಿದರೆ; ಬಳಕೆಯಲ್ಲೂ ಕನ್ನಡವನ್ನು ಮೆರೆಸಬಹುದು

@ಬೋಧನಾ ಸಮಯ ಹೆಚ್ಚಿಸಲು ತಾಕೀತು

@ ವಿವಿಯ ಜಾಲತಾಣವನ್ನು ಸಂಪೂರ್ಣ ಕನ್ನಡೀಕರಣಗೊಳಿಸಲು ಸೂಚನೆ

@ವೈದ್ಯಕೀಯ ನಿಘಂಟು ರಚನೆಗೆ ಸಲಹೆ

@ಕನ್ನಡೇತರರಿಗೆ ವ್ಯವಹಾರಿಕ ಕನ್ನಡ ಕಲಿಸಲು ಸೂಚನೆ

ಮಾನ್ಯ ಮುಖ್ಯಮಂತ್ರಿಗಳ ಇ-ಆಡಳಿತ ಸಲಹೆಗಾರರಾದ ಶ್ರೀ ಬೇಳೂರು ಸುದರ್ಶನ, ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಪ್ರೊ.ಹಿ.ಚಿ.ಬೋರಲಿಂಗಯ್ಯ, ಪ್ರಾಧಿಕಾರದ ಸದಸ್ಯರಾದ ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ, ಡಾ. ಕಿಶೋರ್, ಅಧ್ಯಕ್ಷರ ಆಪ್ತ ಕಾರ್ಯದರ್ಶಿ ಡಾ.ವೀರಶೆಟ್ಟಿ, ಗುಲ್ಬರ್ಗಾ, ಡಾ.ಪಿ.ಎಸ್. ಶಂಕರ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ.ಎಸ್.ಸಚ್ಚಿದಾನಂದ, ವಿಶ್ವವಿದ್ಯಾಲಯದ ಕುಲಸಚಿವರಾದ ಶ್ರೀ ಶಿವಾನಂದ ಕಾಪಶಿ, ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯ ಮಾಪನ) ರಾದ ಡಾ.ಕೆ.ಬಿ.ಲಿಂಗೇಗೌಡ, ವಿಶ್ವವಿದ್ಯಾಲಯದ ಉಪಕುಲಸಚಿವರು ಮತ್ತು ಸಮನ್ವಯ ಅಧಿಕಾರಿಗಳಾದ ಡಾ.ಬಿ.ವಸಂತ ಶೆಟ್ಟಿ ಇತರರು ಸಭೆಯಲ್ಲಿ ಪಾಲ್ಗೊಂಡಿದ್ದರು.

(ಈ ಮಾಹಿತಿಯನ್ನು ತಮ್ಮ ಘನ ಪತ್ರಿಕೆಯಲ್ಲಿ ವರದಿ ಮಾಡಿ ಸಹಕಾರ ನೀಡುವಂತೆ ಕೋರಿಕೆ)

ಸಂಯುಕ್ತ ಕರ್ನಾಟಕ
ಂಗಳೂರು
ಶನಿವಾರ, 22 ಆಗಸ್ಟ್, 2020


# ಕನ್ನಡದ ವೈದ್ಯ ನಿಘಂಟು ಅವಶ್ಯ

**ಬೆಂಗಳೂರು:** ಸರ್ಕಾರದ ಆದೇಶದನ್ವಯ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕನ್ನಡವನ್ನು ಒಂದು ಭಾಷೆಯಾಗಿ ಕಲಿಸುವುದು ಅವುಗಳ ಜವಾಬ್ದಾರಿಯಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ಅಭಿಪ್ರಾಯಪಟ್ಟರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕನ್ನಡ ಅನುಷ್ಠಾನದ ಪ್ರಗತಿಯನ್ನು ಜಾಲ ಸಂಪರ್ಕ ಸಭೆಯ ಮೂಲಕ ಪರಿಶೀಲನೆ ನಡೆಸಿ ಮಾತನಾಡಿದ ಅವರು, ವೈದ್ಯಕೀಯ ಶಿಕ್ಷಣ ಅಭ್ಯಸಿಸುವವರು ಕಡ್ಡಾಯವಾಗಿ ಒಂದು ವರ್ಷ ಗ್ರಾಮೀಣ ಸೇವೆ ಮಾಡಬೇಕಿದೆ. ಹಳ್ಳಿಗಳಲ್ಲಿ ಸೇವೆ ಸಲ್ಲಿಸುವವರು ಜನಭಾಷೆಯಲ್ಲಿ ರೋಗಿಗಳೊಂದಿಗೆ ಆತ್ಮೀಯವಾಗಿ ಮಾತನಾಡಿದರೆ ಸುಲಭವಾಗಿ ಚಿಕಿತ್ಸೆ ನೀಡಿ ತಮ್ಮ ಸೇವಾ ಕಾರ್ಯ ಉತ್ತಮಗೊಳಿಸಿಕೊಳ್ಳಬಹುದು ಎಂದರು.

> “ರಾಜೀವ್‌ಗಾಂಧಿ ವಿಶ್ವವಿದ್ಯಾಲಯದಲ್ಲಿ ಕನ್ನಡೇತರರೂ ಶಿಕ್ಷಣ ಪಡೆಯುತ್ತಿದ್ದಾರೆ. ಆದ್ದರಿಂದ ಅವರಿಗೆ ಕನ್ನಡ ಕಲಿಯಲು ಅನುಕೂಲವಾಗಲು ಪ್ರತ್ಯೇಕ ಪಠ್ಯಪುಸ್ತಕ ರಚಿಸುವುದು ಮತ್ತು ಬೋಧನಾ ಅವಧಿ ಹೆಚ್ಚಿಸಬೇಕು.
>
> **ಟಿ.ಎಸ್. ನಾಗಾಭರಣ**
> ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ

ವೃತ್ತಿ ಶಿಕ್ಷಣದಲ್ಲಿ ಕನ್ನಡ ಕಲಿತರೆ ನಂತರವೂ ಕನ್ನಡವನ್ನು ವ್ಯವಸ್ಥಿತವಾಗಿ ಬಳಸಬಹುದು. ಆದ್ದರಿಂದ ವೈದ್ಯಕೀಯ ಶಿಕ್ಷಣ ಕಲಿಯುವ ಕನ್ನಡೇತರರಿಗೂ ವ್ಯವಹಾರ ಕನ್ನಡವನ್ನು ಶಿಕ್ಷಣ ಹಂತದಲ್ಲೇ ಕಲಿಸುವ ಯೋಜನೆಯನ್ನು ವಿಶ್ವವಿದ್ಯಾಲಯಗಳು ರೂಪಿಸಬೇಕು. ಜೊತೆಗೆ ಕನ್ನಡದ ವೈದ್ಯಕೀಯ ನಿಘಂಟನ್ನು ಮಾಡಿದರೆ ವೈದ್ಯಶಾಸ್ತ್ರದ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ರೋಗಿಗಳ ಜೊತೆ ವ್ಯವಹರಿಸಲು ಸಹಕಾರಿಯಾಗುತ್ತದೆ ಎಂದರು.

ಮುಖ್ಯಮಂತ್ರಿಗಳ ಇ-ಆಡಳಿತ ಸಲಹೆಗಾರ ಬೇಳೂರು ಸುದರ್ಶನ, ಹಂಪಿ ಕನ್ನಡ ವಿವಿಯ ವಿಶ್ರಾಂತ ಕುಲಪತಿ ಪ್ರೊ.ಹಿ.ಚಿ.ಬೋರಲಿಂಗಯ್ಯ, ಪ್ರಾಧಿಕಾರದ ಸದಸ್ಯೆ ಡಾ.ವಿಜಯಲಕ್ಷ್ಮಿ ಬಾಳೆಕುಂದ್ರಿ ಮತ್ತಿತರರಿದ್ದರು.

ಶನಿವಾರ • ಆಗಸ್ಟ್ 22, 2020

# 'ವೈದ್ಯಕೀಯ ವಿದ್ಯಾರ್ಥಿಗಳಿಗೆ ಕನ್ನಡ ಕಲಿಸಿ'



ಬೆಂಗಳೂರು: 'ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ವಿದ್ಯಾರ್ಥಿಗಳಿಗೆ ಕನ್ನಡವನ್ನು ಒಂದು ಭಾಷೆಯನ್ನಾಗಿ ಕಡ್ಡಾಯವಾಗಿ ಕಲಿಸಬೇಕು. ಇದರಿಂದ ಮುಂದಿನ ದಿನಗಳಲ್ಲಿ ರೋಗಿಗಳೊಂದಿಗೆ ಉತ್ತಮವಾಗಿ ಸಂವಹನ ನಡೆಸಿ, ಚಿಕಿತ್ಸೆ ಒದಗಿಸಲು ಸಾಧ್ಯವಾಗುತ್ತದೆ' ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಟಿ.ಎಸ್. ನಾಗಾಭರಣ ತಿಳಿಸಿದರು.

ಕನ್ನಡ ಅನುಷ್ಠಾನದ ಕುರಿತು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಜತೆಗೆ ಪ್ರಾಧಿಕಾರವು ಆನ್‌ಲೈನ್ ಮೂಲಕ ಶುಕ್ರವಾರ ಏರ್ಪಡಿಸಿದ್ದ ಸಭೆಯಲ್ಲಿ ಅವರು ಮಾತನಾಡಿದರು.

'ಹಳ್ಳಿಗಳಲ್ಲಿ ಸೇವೆ ಸಲ್ಲಿಸುವಾಗ ಜನಭಾಷೆಯಲ್ಲಿ ರೋಗಿಗಳನ್ನು ಆತ್ಮೀಯವಾಗಿ ಮಾತನಾಡಿಸಿ, ಸಮಸ್ಯೆ ಅರಿತರೆ ಸುಲಭವಾಗಿ ಚಿಕಿತ್ಸೆ ನೀಡಲು ಸಾಧ್ಯ. ಹಾಗಾಗಿ ಕನ್ನಡ ಕಲಿಕೆಗೆ ಕ್ರಮಕೈಗೊಳ್ಳಬೇಕು' ಎಂದು ವಿಶ್ವವಿದ್ಯಾಲಯದ ಕುಲಪತಿ ಡಾ.ಎಸ್. ಸಚ್ಚಿದಾನಂದ ಅವರಿಗೆ ಸೂಚಿಸಿದರು.